**All India Radio: Bangalore**
**Regional Bulletin In Kannada**
**04.06.2025 / 2.30 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**04.06.2025 / 2.30 p.m.**
**********

**ಮುಖ್ಯಾಂಶಗಳು**

೧. ಹೇಮಾವತಿ ನಾಲೆ ಯೋಜನೆ ವಿರೋಧಿ ಹೋರಾಟಗಾರರ ಪ್ರಕರಣ ಕೈಬಿಡುವಂತೆ ಸರ್ಕಾರಕ್ಕೆ ಸಚಿವ ವಿ ಸೋಮಣ್ಣ ಪತ್ರ

೨. ವಿಧಾನಸೌಧದಲ್ಲಿಂದು ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡಕ್ಕೆ ಮುಖ್ಯಮಂತ್ರಿ ಸ್ವಾಗತ - ಸಂಜೆ ಚಿನ್ನಸ್ವಾಮಿಯಲ್ಲಿ ವಿಜಯೋತ್ಸವ

೩. ಒಂದೇದಿನ ೧.೦೬ಕೋಟಿ ಲೀಟರ್ ಹಾಲು ಸಂಗ್ರಹಿಸಿ ದಾಖಲೆ ಬರೆದ ಕರ್ನಾಟಕ ಹಾಲು ಉತ್ಪಾದಕರ ಒಕ್ಕೂಟ

೪. ರಾಜ್ಯದ ವಿವಿಧೆಡೆ ವಿಕಸಿತ ಕೃಷಿ ಸಂಕಲ್ಪ ಅಭಿಯಾನ - ವಿಜ್ಞಾನಿಗಳಿಂದ ರೈತರ ಜೊತೆ ಸಂವಾದ

*******************

ಹೇಮಾವತಿ ನಾಲೆ ಯೋಜನೆ ವಿರೋಧಿಸಿ ಪ್ರತಿಭಟನೆ ನಡೆಸಿದ ಪ್ರತಿಭಟನಾಕಾರರ ವಿರುದ್ಧದ ಪ್ರಕರಣಗಳನ್ನು ಕೈಬಿಡುವಂತೆ ಕೇಂದ್ರ ಸಚಿವ ಸೋಮಣ್ಣ ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರನ್ನು ಒತ್ತಾಯಿಸಿದ್ದಾರೆ. ಈ ಕುರಿತಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಪತ್ರ ಬರೆದಿದ್ದಾರೆ. ಪತ್ರದಲ್ಲಿ ಚುನಾಯಿತ ಪ್ರತಿನಿಧಿಗಳು ಮತ್ತು ಶ್ರೀಗಳ ವಿರುದ್ಧ ದಾಖಲಾಗಿರುವ ಪ್ರಕರಣಗಳನ್ನು ಹಿಂಪಡೆಯುವಂತೆ ತಿಳಿಸಿದ್ದಾರೆ. ತುಮಕೂರು ಭಾಗದ ಚುನಾಯಿತ ಪ್ರತಿನಿಧಿಗಳೊಂದಿಗೆ ವಿಶೇಷ ಸಭೆ ನಡೆಸಬೇಕೆಂದು ಸೋಮಣ್ಣ ಒತ್ತಾಯಿಸಿದ್ದು ಸಭೆಯಲ್ಲಿ ತಾವು ಸಹ ಭಾಗವಹಿಸುವುದಾಗಿ ಹೇಳಿದ್ದಾರೆ. ಇದೇ ವೇಳೆ ಹೇಮಾವತಿ ಎಕ್ಸ್‌ಪ್ರೆಸ್ ಲಿಂಕ್ ನಾಲೆ ಯೋಜನೆಯನ್ನು ಜಾರಿಗೆ ತಂದರೆ, ತುಮಕೂರು ಪ್ರದೇಶದ ರೈತರು ತಮ್ಮ ನೀರಿನ ಪಾಲನ್ನು ಕಳೆದುಕೊಳ್ಳಲಿದ್ದು ಯೋಜನೆಯನ್ನು ಸ್ಥಗಿತಗೊಳಿಸಬೇಕು ಎಂದು ಆಗ್ರಹಿಸಿದ್ದಾರೆ.

*******************

ಐಪಿಎಲ್ ಟಿ-೨೦ ಗೆದ್ದ ರಾಯಲ್ ಚಾಲೆಂಜರ್ಸ್ ತಂಡ ವಿಧಾನಸೌಧದಲ್ಲಿ ಇಂದು ಸಂಜೆ ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರನ್ನು ಭೇಟಿಮಾಡಲಿದೆ. ಈ ಸಂದರ್ಭದಲ್ಲಿ ರಾಜ್ಯ ಸರ್ಕಾರ ಆರ್‌ಸಿಬಿ ತಂಡಕ್ಕೆ ಅಭಿನಂದನೆ ಸಲ್ಲಿಸಲಿದೆ. ಭದ್ರತಾ ಕಾರಣಗಳಿಂದಾಗಿ ತೆರೆದ ವಾಹನದಲ್ಲಿ ಮೆರವಣಿಗೆ ನಡೆಯುವುದಿಲ್ಲ ಎಂದು ಉಪಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ಹಾಗೂ ಗೃಹ ಸಚಿವ ಡಾ.ಜಿ.ಪರಮೇಶ್ವರ್ ತಿಳಿಸಿದ್ದಾರೆ. ಅಭಿನಂದನೆ

ಬಳಿಕ ಎಲ್ಲಾ ಆಟಗಾರರು ಬಸ್ಸ್ ನಲ್ಲಿ ಚಿನ್ನಸ್ವಾಮಿ ಕ್ರೀಡಾಂಗಣಕ್ಕೆ ತೆರಳಲಿದ್ದಾರೆ ಎಂದು ಪರಮೇಶ್ವರ್ ಹೇಳಿದ್ದಾರೆ. ಬಳಿಕ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ವಿಜಯೋತ್ಸವ ನಡೆಯಲಿದೆ. ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡದ ಸಂಭ್ರಮಾಚರಣೆ ಹಿನ್ನೆಲೆಯಲ್ಲಿ ಚಿನ್ನಸ್ವಾಮಿ ಕ್ರೀಡಾಂಗಣದ ಸುತ್ತ ಭಿಗಿ ಭದ್ರತೆ ಏರ್ಪಡಿಸಲಾಗಿದೆ.

*******************

ಸಂಭ್ರಮಾಚರಣೆ ವೇಳೆ ಅಭಿಮಾನಿಗಳು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಲಿದ್ದು  ಆಟಗಾರರು ಮತ್ತು ಅಭಿಮಾನಿಗಳಿಗೆ ಯಾವುದೇ ತೊಂದರೆ ಆಗಬಾರದು ಎಂದು ಪೊಲೀಸ್ ಮಹಾನಿರ್ದೇಶಕ ಸಲೀಂ ಹಾಗೂ ಸಂಚಾರಿ ಜಂಟಿ ಆಯುಕ್ತ ಅನುಚೇತ್‌ಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸೂಚನೆ ನೀಡಿದ್ದಾರೆ. ವಾಹನ ಸವಾರರಿಗೆ ಬೇರೆ ಬೇರೆ ಮಾರ್ಗದ ವ್ಯವಸ್ಥೆ ಮಾಡಿ. ವಿಧಾನಸೌಧ, ಚಿನ್ನಸ್ವಾಮಿ ಕ್ರೀಡಾಂಗಣದ ಸುತ್ತ ಟ್ರಾಫಿಕ್ ನಿಭಾಯಿಸುವಂತೆ ನಿರ್ದೇಶನ ನೀಡಿದ್ದಾರೆ. ಇದೇವೇಳೆ ಆರ್‌ಸಿಬಿ ಆಟಗಾರರಿಗೆ ಮುಖ್ಯಮಂತ್ರಿ ಸಿದ್ಧರಾಮಯ್ಯ ಅಭಿನಂದಿಸಿದ್ದಾರೆ.

**ಧ್ವನಿ : ಮುಖ್ಯಮಂತ್ರಿ ಸಿದ್ಧರಾಮಯ್ಯ**

*******************

ಕರ್ನಾಟಕ ಹಾಲು ಒಕ್ಕೂಟ - ಕೆಎಂಎಫ್  ಒಂದೇ ದಿನ ಸಾರ್ವಕಾಲಿಕ ಗರಿಷ್ಠ ೧.೦೬ ಕೋಟಿ ಲೀಟರ್ ಹಾಲು ಸಂಗ್ರಹಿಸುವ ಮೂಲಕ ರಾಜ್ಯದ ಡೈರಿ ವಲಯದಲ್ಲಿ ಹೊಸ ದಾಖಲೆ ಸೃಷ್ಟಿಸಿದೆ. ಅನುಕೂಲಕರವಾದ ಮುಂಗಾರು ಮಳೆ ಮತ್ತು ಹಸಿರು ಮೇವಿನ ಲಭ್ಯತೆಯ ಕಾರಣ ಈ ದಾಖಲೆ ಮಾಡುವುದು ಕೆಎಂಎಫ್ ಗೆ ಸಾಧ್ಯವಾಗಿದೆ. ಎನ್ನಲಾಗಿದೆ. ಕೆಎಂಎಫ್ ಪ್ರಕಾರ, ಇದು ಕಳೆದ ವರ್ಷ ದಿನವೊಂದರಲ್ಲಿ ಸಂಗ್ರಹಿಸಿದ ಗರಿಷ್ಠ ಹಾಲಿಗಿಂತಲೂ ಹೆಚ್ಚು. ಕಳೆದ ವರ್ಷ ಜೂನ್ ೨೮ ರಂದು ೧ ಕೋಟಿ ಲೀಟರ್ ಹಾಲು ಸಂಗ್ರಹಿಸಲಾಗಿತ್ತು. ಆನಂತರ ದೈನಂದಿನ ಸರಾಸರಿ ಸಂಗ್ರಹ ಪ್ರಮಾಣದಲ್ಲಿ ಗಮನಾರ್ಹ ಏರಿಕೆ ಕಂಡಿತ್ತು. ಇದರೊಂದಿಗೆ, ಹಾಲು ಉತ್ಪಾದಿಸುವ ಪ್ರಮುಖ ರಾಜ್ಯವಾಗಿ ಕರ್ನಾಟಕ ತನ್ನ ಛಾಪು ಮುಂದುವರಿಸಿದೆ. ರಾಜ್ಯದ ಹಲವಾರು ಪ್ರದೇಶಗಳಲ್ಲಿ ಮುಂಗಾರು ಮಳೆ ಚುರುಕುಗೊಂಡಿರುವುದು ಹಾಲಿನ ಉತ್ಪಾದನೆ ಹೆಚ್ಚಳಕ್ಕೆ ಪ್ರಮುಖ ಕಾರಣ ಎಂದು ಕೆಎಂಎಫ್ ಅಧಿಕಾರಿಗಳು ತಿಳಿಸಿದ್ದಾರೆ. ಹೆಚ್ಚಿನ ಪ್ರಮಾಣದಲ್ಲಿ ಮೇವಿನ ಲಭ್ಯತೆ, ಜಾನುವಾರುಗಳಲ್ಲಿ ಪೌಷ್ಟಿಕತೆ, ಆರೋಗ್ಯ ಸುಧಾರಣೆ ಹಾಲಿನ ಉತ್ಪಾದನೆ ಹೆಚ್ಚಳಕ್ಕೆ ಕೊಡುಗೆ ನೀಡಿವೆ. ಜೂನ್ ೧ ರಂದು ವಿಶ್ವ ಹಾಲು ದಿನಾಚರಣೆಯ ಅಂಗವಾಗಿ, ಕೆಎಂಎಫ್ ತನ್ನ ಜನಪ್ರಿಯ ನಂದಿನಿ ಬ್ರ್ಯಾಂಡ್ ಅಡಿಯಲ್ಲಿ ೧೮ ಹೊಸ ಬಗೆಯ ಕೇಕ್‌ಗಳು ಮತ್ತು ಇತರೇ ಹಾಲಿನ ಉತ್ಪನ್ನಗಳನ್ನು ಬಿಡುಗಡೆ ಮಾಡಿತ್ತು.

*******************

ಕಲಬುರಗಿ ನಗರದ ಕೇಂದ್ರ ಬಸ್ ನಿಲ್ದಾಣದಲ್ಲಿ ಇಂದು ಆಯೋಜಿಸಿದ ರಾಜ್ಯ ಸರ್ಕಾರದ ಎರಡು ವರ್ಷಗಳ ಸಾಧನೆ ಬಿಂಬಿಸುವ ಮಾಹಿತಿ ಮಳಿಗೆ ಪ್ರದರ್ಶನವನ್ನು ವೈದ್ಯಕೀಯ ಶಿಕ್ಷಣ, ಕೌಶಲ್ಯಾಭಿವೃದ್ಧಿ ಸಚಿವ ಡಾ.ಶರಣಪ್ರಕಾಶ ಪಾಟೀಲ್ ಉದ್ಘಾಟಿಸಿದರು.  ಈ ಸಂದರ್ಭದಲ್ಲಿ ಮಾತನಾಡಿದ ಸಚಿವರು, ರಾಜ್ಯ ಸರ್ಕಾರ

ನಾಡಿನ ೭ ಕೋಟಿ ಜನರ ಬದುಕು ಗಟ್ಟಿಗೊಳಿಸಲು ಪಂಚ ಗ್ಯಾರಂಟಿ ಯೋಜನೆ ಜಾರಿಗೆ ತಂದಿದೆ. ಈ ಯೋಜನೆಗಳು ನಾಡಿನ ಜನರಿಗೆ ಭರವಸೆಯ ಬೆಳಕಾಗಿವೆ ಎಂದು ತಿಳಿಸಿದ್ದಾರೆ. ಮುಂದಿನ ಮೂರು ವರ್ಷ ಗ್ಯಾರಂಟಿ ಯೋಜನೆಗಳು ರಾಜ್ಯದಲ್ಲಿ ಜಾರಿಯಲ್ಲಿರಲಿವೆ ಎಂದು ಸಚಿವರು ಸ್ಪಷ್ಟಪಡಿಸಿದ್ದಾರೆ.

*******************

ಕೊಪ್ಪಳ ಜಿಲ್ಲೆಯ ಹಿಟ್ನಾಳ ಗ್ರಾಮದಲ್ಲಿ ವಿಕಸಿತ ಕೃಷಿ ಸಂಕಲ್ಪ ಅಭಿಯಾನ ನಡೆಯಿತು. ಅಭಿಯಾನ ಕಾರ್ಯಕ್ರಮಕ್ಕೆ ಕೊಪ್ಪಳ ಕೃಷಿ ವಿಸ್ತರಣಾ ಶಿಕ್ಷಣ ಕೇಂದ್ರ ಮುಖ್ಯಸ್ಥ ಡಾ.ಎಂ.ವಿ.ರವಿ ಚಾಲನೆ ನೀಡಿದರು. ಕಾರ್ಯಕ್ರಮದಲ್ಲಿ ಕೃಷಿ ವಿಜ್ಞಾನಿಗಳಾದ ಡಾ.ವಾಮನಮೂರ್ತಿ,ಜೆ.ರಾಧಾ ಅಧಿಕಾರಿಗಳು ಹಾಗೂ ಕೃಷಿ ಸಖಿಯರು ರೈತರು ಭಾಗವಹಿಸಿದ್ದರು.

**ಧ್ವನಿ: ಡಾ.ಎಂ.ವಿ. ರವಿ ಕೆವಿಕೆ ಮುಖ್ಯಸ್ಥರು ಕೊಪ್ಪಳ**

ಕೋಲಾರ ಜಿಲ್ಲಾ ಕೃಷಿ ವಿಜ್ಞಾನ ಕೇಂದ್ರದಿಂದ ವಿಕಸಿತ ಕೃಷಿ ಸಂಕಲ್ಪ ಅಭಿಯಾನ ಕೆಜಿಎಫ್ ತಾಲೂಕಿನ ವಿವಿಧ ಗ್ರಾಮ ಪಂಚಾಯತಿಗಳಲ್ಲಿ ಜರುಗಿತು. ರೈತರಿಗೆ ಮುಂಗಾರು ಹಂಗಾಮಿನ ಕೃಷಿ ಚಟುವಟಿಕೆಗಳ ಸಿದ್ಧತೆ, ಸಾವಯವ ಗೊಬ್ಬರ, ಬೀಜೋಪಚಾರ, ಬೆಳೆ ಮತ್ತು ತಳಿಗಳ ಆಯ್ಕೆ, ಹೊಸ ತಂತ್ರಜ್ಞಾನಗಳ ಕುರಿತು ಮಾಹಿತಿ ಒದಗಿಸಲಾಯಿತು. ಈ ಕುರಿತಂತೆ ಕೃಷಿ ರೈತ ಮಹಿಳೆ ಅನ್ನಪೂರ್ಣ ಆಕಾಶವಾಣಿಯೊಂದಿಗೆ ಸಂತಸ ಹಂಚಿಕೊಂಡಿದ್ದಾರೆ.

**ಧ್ವನಿ : ಅನ್ನಪೂರ್ಣ , ರೈತ ಕೃಷಿ ಮಹಿಳೆ**

ಕೋಲಾರ ಜಿಲ್ಲಾ ಕೃಷಿ ವಿಜ್ಞಾನ ಕೇಂದ್ರದ ಮುಖ್ಯಸ್ಥ ಶಿವಾನಂದ ಹೊಂಗಲ್ ಮಾತನಾಡಿ, ಜಿಲ್ಲೆಯ ೩೮ ಗ್ರಾಮಗಳಿಗೆ ಭೇಟಿ ನೀಡಿ ಸುಮಾರು ೫ ಸಾವಿರದ ೫೦೦ ರೈತರ ಜೊತೆ ಸಂವಾದ ನಡೆಸಲಾಗಿದೆ. ಕೇಂದ್ರ ಮತ್ತು ರಾಜ್ಯ ಸರ್ಕಾರದ ಯೋಜನೆಗಳು, ಬೆಳೆ, ತಳಿಗಳ ಆಯ್ಕೆ, ಹೊಸ ತಂತ್ರಜ್ಞಾನಗಳ ಕುರಿತು ಮಾಹಿತಿ ಒದಗಿಸಲಾಗುತ್ತಿದೆ. ನಾಳೆ ಕೆಜಿಎಫ್ ತಾಲೂಕಿನ ಮಾರಿಕುಪ್ಪಂ, ಕ್ಯಾಸಂಬಳ್ಳಿ ಸುತ್ತಮುತ್ತ ಅಭಿಯಾನ ನಡೆಯಲಿದ್ದು, ಹೆಚ್ಚಿನ ಸಂಖ್ಯೆಯಲ್ಲಿ ರೈತರು ಪಾಲ್ಗೊಂಡು ಅಭಿಯಾನದ ಪ್ರಯೋಜನ ಪಡೆದುಕೊಳ್ಳಬೇಕು ಎಂದು ಮನವಿ ಮಾಡಿದ್ದಾರೆ.

**ಧ್ವನಿ - ಶಿವಾನಂದ ಹೊಂಗಲ್, ಕೃಷಿ ವಿಜ್ಞಾನ ಕೇಂದ್ರದ ಮುಖ್ಯಸ್ಥ**

*******************

ರಾಷ್ಟ್ರೀಯ ಭದ್ರತೆ ಹಾಗೂ ಸಾರ್ವಜನಿಕರ ಸುರಕ್ಷತೆ ದೃಷ್ಟಿಯಿಂದ ಚಿಕ್ಕಬಳ್ಳಾಪುರ ಜಿಲ್ಲೆಯಾದ್ಯಂತ ಖಾಸಗಿ ಡ್ರೋನ್ ಬಳಕೆಯನ್ನು ತಕ್ಷಣದಿಂದ ಜಾರಿಗೆ ಬರುವಂತೆ ನಿಷೇಧಿಸಲಾಗಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕುಶಲ್ ಚೌಕ್ಸೆ ತಿಳಿಸಿದ್ದಾರೆ. ಈ ಕುರಿತು ಮಾಹಿತಿ ನೀಡಿರುವ ಅವರು, ರಾಷ್ಟ್ರೀಯ ಭದ್ರತೆ ಹಾಗೂ ಸಾರ್ವಜನಿಕರ ಸುರಕ್ಷತೆಯ ದೃಷ್ಟಿಯಿಂದ ಜಿಲ್ಲೆಯಾದ್ಯಂತ ಖಾಸಗಿ ಡ್ರೋನ್ ಬಳಕೆಯ ಮೇಲೆ ತಕ್ಷಣದಿಂದ ಜಾರಿಗೆ ಬರುವಂತೆ ನಿಷೇಧ ಹೇರಲಾಗಿದೆ. ಎಲ್ಲಾ ಖಾಸಗಿ ವ್ಯಕ್ತಿಗಳು ಮತ್ತು ಸಂಸ್ಥೆಗಳು ಜಿಲ್ಲೆಯ ಯಾವುದೇ ಸ್ಥಳದಲ್ಲಿ, ಯಾವುದೇ ರೀತಿಯಲ್ಲಿ ಡ್ರೋನ್‌ಗಳನ್ನು ಬಳಸದಂತೆ ಸೂಚಿಸಲಾಗಿದೆ. ಕೈಗಾರಿಕೆ ಮತ್ತು ವಾಣಿಜ್ಯ ಸಂಸ್ಥೆಗಳಿಗೆ ಭದ್ರತೆ ಒದಗಿಸುವ ಎಲ್ಲಾ ಖಾಸಗಿ ಭದ್ರತಾ ಸಂಸ್ಥೆಗಳು ಡ್ರೋನ್ ಬಳಕೆಯ ಬಗ್ಗೆ ಈ ಕೂಡಲೇ ಮಾಹಿತಿಯನ್ನು ಕಡ್ಡಾಯವಾಗಿ ನೀಡಬೇಕು ಎಂದು ಸ್ಪಷ್ಟಪಡಿಸಿದ್ದಾರೆ.

********************

ರಾಷ್ಟ್ರೀಯ ಮಾನವ ಹಕ್ಕುಗಳ ಆಯೋಗ ಕಣ್ಣಿನ ಆಘಾತ ಹಾಗೂ ಕಣ್ಣಿನ ಗಾಯ ಮತ್ತು ಅದರ ಅಡ್ಡಪರಿಣಾಮಗಳನ್ನು ಕಡಿಮೆ ಮಾಡಲು ಮತ್ತು ಕಣ್ಣಿನ ಆಘಾತದಿಂದ ಕುರುಡುತನವನ್ನು ತಡೆಗಟ್ಟಲು ಹಲವಾರು ಮಾರ್ಗಸೂಚಿಗಳನ್ನು ಹೊರಡಿಸಿದೆ. ಭಾರತದಲ್ಲಿ ಅಂಗವೈಕಲ್ಯಕ್ಕೆ ಪ್ರಮುಖ ಕಾರಣಗಳಲ್ಲಿ ಕಣ್ಣಿನ ಗಾಯವೂ ಒಂದಾಗಿದೆ. ಈ ಹಿನ್ನೆಲೆಯಲ್ಲಿ #ಔಆUಐಂಖಖಿಖಂUಒಂ ಅನ್ನು ತಡೆಯೋಣ, ಕಡಿಮೆ ಮಾಡೋಣ ಮತ್ತು ತಗ್ಗಿಸೋಣ ಎಂಬ ಅಭಿಯಾನ ನಡೆಯುತ್ತಿದೆ.

********************

ದಾವಣಗೆರೆಯಲ್ಲಿ ಟ್ರಕ್ ಟರ್ಮಿನಲ್ ನಿರ್ಮಾಣ ಸಂಬಂಧ ೫ ಎಕರೆ ಜಾಗ ಗುರುತಿಸಲು ನಗರಾಭಿವೃದ್ಧಿ ಪ್ರಾಧಿಕಾರದ ಅಧಿಕಾರಿಗಳಿಗೆ ಜಿಲ್ಲಾ ಉಸ್ತುವಾರಿ ಸಚಿವ ಎಸ್.ಎಸ್.ಮಲ್ಲಿಕಾರ್ಜುನ್ ಸೂಚಿಸಿದ್ದಾರೆ. ದಾವಣಗೆರೆ-ಹರಿಹರ ನಗರಾಭಿವೃದ್ಧಿ ಪ್ರಾಧಿಕಾರದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಅವರು, ಬೆಳೆಯುತ್ತಿರುವ ನಗರವನ್ನು ಗಮನದಲ್ಲಿ ಇಟ್ಟುಕೊಂಡು ವರ್ತುಲ ರಸ್ತೆಗಳನ್ನು ನಿರ್ಮಾಣ ಮಾಡಲಾಗಿದೆ. ವಾಹನಗಳ ಸುಗಮ ಸಂಚಾರ ಮತ್ತು ಅವುಗಳ ನಿಲುಗಡೆಗೆ ಕನಿಷ್ಟ ೫ ಎಕರೆ ಜಾಗದ ಅವಶ್ಯಕತೆ ಇದೆ ಎಂದು ಹೇಳಿದ್ದಾರೆ.

********************

"ನಾಡೋಜ ಡಾ. ಕಯ್ಯಾರ ರಾಷ್ಟ್ರೀಯ ಪ್ರಶಸ್ತಿ" ಗೆ ಆಕಾಶವಾಣಿಯ ನಿವೃತ್ತ ಕಾರ್ಯಕ್ರಮ ಮುಖ್ಯಸ್ಥರು ಹಾಗೂ ಪ್ರಸ್ತುತ ಕಲಬುರಗಿ ದೂರದರ್ಶನ ಕೇಂದ್ರದ ವಿಶೇಷ ಕಾರ್ಯಕ್ರಮ ನಿರೂಪಕರಾದ ಸಾಹಿತಿ ಡಾ. ಸದಾನಂದ ಪೆರ್ಲ ಸೇರಿದಂತೆ ಒಟ್ಟು ನಾಲ್ವರನ್ನು ಆಯ್ಕೆ ಮಾಡಲಾಗಿದೆ. ಕಯ್ಯಾರರ ಜನ್ಮದಿನ ಇದೇ ಲರಂದು ಮಧ್ಯಾಹ್ನ ೩ ಗಂಟೆಗೆ ಕಾಸರಗೋಡಿನ ಕನ್ನಡ ಭವನದಲ್ಲಿ ಪ್ರಶಸ್ತಿ ಪ್ರಧಾನ ಸಮಾರಂಭ ನಡೆಯಲಿದೆ. ಕಾಸರಗೋಡಿನ ಪೆರ್ಲ ಸಮೀಪದ ಬಜಕೂಡ್ಲಿನವರಾದ ಡಾ. ಸದಾನಂದ ಪೆರ್ಲ "ಕಯ್ಯಾರ ಕಿಞ್ಞಣ್ಣ ರೈ ಯವರ ಸಾಹಿತ್ಯ ಮತ್ತು ಕಾಸರಗೋಡಿನ ಕನ್ನಡ ಹೋರಾಟ" ಎಂಬ ವಿಷಯದ ಕುರಿತಾಗಿ ಮಹಾ ಪ್ರಬಂಧ ಮಂಡಿಸಿ ಗುಲ್ಬರ್ಗ ವಿಶ್ವವಿದ್ಯಾಲಯದಿಂದ ಡಾಕ್ಟರೇಟ್ ಪದವಿಯನ್ನು ಪಡೆದಿದ್ದಾರೆ.

********************

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರದಲ್ಲಿ ಬಕ್ರೀದ್ ಆಚರಣೆ ಹಿನ್ನೆಲೆಯಲ್ಲಿ ಜಿಲ್ಲಾಡಳಿತ ಮತ್ತು ಜಿಲ್ಲಾ ಪೊಲೀಸ್ ಇಲಾಖೆ ವತಿಯಿಂದ ಶಾಂತಿ ಸಭೆ ನಡೆಯಿತು. ಜಿಲ್ಲಾಧಿಕಾರಿ ಡಾ.ಎಬಿ.ಬಸವರಾಜು ಮಾತನಾಡಿ, ಉಳ್ಳವರು ಇಲ್ಲದವರಿಗೆ ದಾನ ನೀಡುವ ಮೂಲಕ ಹಂಚಿ ತಿನ್ನುವ ಸಂಕೇತವಾದ ಬಕ್ರೀದ್ ಹಬ್ಬವನ್ನು ಶಾಂತಿ ಸೌಹಾರ್ದತೆಯಿಂದ ಆಚರಿಸಬೇಕಿದೆ. ಸಾಮಾಜಿಕ ಜಾಲತಾಣಗಳಲ್ಲಿ ಬರುವ ಶಾಂತಿ ಕದಡುವ ಸಂದೇಶಗಳ ಬಗ್ಗೆ ತಲೆ ಕೆಡಿಸಿಕೊಳ್ಳದೇ ಅರ್ಥಪೂರ್ಣವಾಗಿ ಹಬ್ಬ ಆಚರಿಸಿ ಎಂದು ಮನವಿ ಮಾಡಿದ್ದಾರೆ.

********************

ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಕೃಷಿ ಇಲಾಖೆ, ತೋಟಗಾರಿಕೆ ಇಲಾಖೆ, ಕೃಷಿ ಮಾರಾಟ ಇಲಾಖೆ, ಸಹಕಾರ ಇಲಾಖೆ ಸಹಯೋಗದೊಂದಿಗೆ ಎಫ್.ಎ.ಕ್ಯೂ ಗುಣಮಟ್ಟದ ಹಸಿಶುಂಠಿಯನ್ನು ರೈತರಿಂದ ಖರೀದಿಸಲಾಗುತ್ತಿದೆ. ಕೇಂದ್ರ ಸರ್ಕಾರವು ಪ್ರತಿ ಕ್ವಿಂಟಾಲ್‌ಗೆ ೨ಸಾವಿರದ ೪೪೫ ರೂಪಾಯಿ ದರ ನಿಗದಪಡಿಸಿದೆ. ಹೊಸಕೋಟೆ ತಾಲ್ಲೂಕಿನ ಸೂಲಿಬೆಲೆ ಹೋಬಳಿಯಲ್ಲಿ ಖರೀದಿ ಕೇಂದ್ರ ಪ್ರಾರಂಭವಾಗಿದ್ದು, ಜಿಲ್ಲೆಯ ಎಲ್ಲಾ ರೈತರು ಕೇಂದ್ರ ಸರ್ಕಾರದ ಮಾರುಕಟ್ಟೆ ಮಧ್ಯಪ್ರವೇಶ ಯೋಜನೆಯಡಿ ಹಸಿಶುಂಠಿ ಖರೀದಿ ಅನುಕೂಲವನ್ನು ಸೂಕ್ತ ದಾಖಲಾತಿಗಳನ್ನು ನೀಡಿ ಸದುಪಯೋಗ ಪಡಿಸಿಕೊಳ್ಳಬೇಕಿದೆ ಎಂದು ಕೃಷಿ ಮಾರಾಟ ಇಲಾಖೆ ಉಪನಿರ್ದೇಶಕರು ತಿಳಿಸಿದ್ದಾರೆ.

<><> **ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು** <><>

*****************